3. ಔರಾದ: ಯೋಜನೆ ಪೂರ್ಣಗೊಂಡ ನಂತರ ಔರಾದ ಪಟ್ಟಣದ 36555 ಜನರು ಹಾಗೂ ಮಾರ್ಗ ಮಧ್ಯದ ಆರು ಹಳ್ಳಿಗಳ 28655 ಜನರು ಒಟ್ಟು 65210 ಜನರು ಲಾಭ ಪಡೆಯಲಿದ್ದಾರೆ.

ಮಂಜೂರಾದ ಕೇಂದ್ರ ಸರ್ಕಾರದ ಅನುದಾನ

121 (400) ಹ್ಯಾರಿಸ್ ಎನ್.ಎ. (ಶಾಂತಿನಗರ): ಮಾನ್ಯ ನಗರಾಭಿವೃದ್ಧಿ, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ, ಪೌರಾಡಳಿತ ಮತ್ತು ಸ್ಥಳೀಯ ಸಂಸ್ಥೆಗಳು ಹಾಗೂ ಬೆಂಗಳೂರು ಜಲ ಮಂಡಳಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಕಳೆದ ಎರಡು ವರ್ಷಗಳಲ್ಲಿ ಪೌರಾಡಳಿತ ಮತ್ತು ಸ್ಥಳೀಯ ಸಂಸ್ಥೆಗಳಿಗೆ ಮಂಜೂರಾದ ಕೇಂದ್ರ ಸರ್ಕಾರದ ಅನುದಾನದ ಮೊತ್ತವೆಷ್ಟು; ಅದನ್ನು ಪೂರ್ಣ ಪ್ರಮಾಣದಲ್ಲಿ ಬಳಸಿಕೊಳ್ಳಲಾಗಿದೆಯೇ

ಆ) ಈ ಸಂಸ್ಥೆಗಳ ಅಭಿವೃದ್ಧಿಗಾಗಿ ಸರ್ಕಾರದ ಯೋಜನೆಗಳೇನು ; (ವಿವರ ನೀಡುವುದು)

ಇ) ಈ ಪ್ರದೇಶಗಳಲ್ಲಿನ ಮೂಲಭೂತ ಸೌಕರ್ಯಗಳ ಅಭಿವೃದ್ಧಿಗೆ ಇಲಾಖೆಯು ಕೈಗೊಂಡ ಕ್ರಮಗಳೇನು ?

ಶ್ರೀ ಎಸ್. ಸುರೇಶ್ ಕುಮಾರ್ (ನಗರಾಭಿವೃದ್ಧಿ, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ, ಪೌರಾಡಳಿತ ಮತ್ತು ಸ್ಥಳೀಯ ಸಂಸ್ಥೆಗಳು ಹಾಗೂ ಬೆಂಗಳೂರು ಜಲ ಮಂಡಳಿ ಸಚಿವರು):

ಅ) ಕಳೆದ ಎರಡು ವರ್ಷಗಳಲ್ಲಿ ರಾಜ್ಯದ ಪೌರಾಡಳಿತ ಮತ್ತು ಸ್ಥಳೀಯ ಸಂಸ್ಥೆಗಳಿಗೆ ಮಂಜೂರಾದ ಯೋಜನೆಗಳಿಗೆ ಕೇಂದ್ರ ಸರ್ಕಾರದಿಂದ ಬಿಡುಗಡೆಯಾದ ಅನುದಾನದ ವಿವರ ಈ ಕೆಳಕಂಡಂತೆ ಇದೆ.

(ರೂ. ಕೋಟಿಗಳಲ್ಲಿ)

ಕ್ರ.ಸಂ.	ವರ್ಷ	ಬಿಡುಗಡೆಯಾದ ಮೊತ್ತ
1	2009–10	442.18
2.	2010–11 (ಈವರೆವಿಗೂ)	380–29

ಕೇಂದ್ರ ಸರ್ಕಾರದಿಂದ ಬಿಡುಗಡೆಯಾದ ಅನುದಾನವನ್ನು ಆಯಾ ಯೋಜನೆಗಳ ಕಾಲಮಿತಿಯೊಳಗೆ ಪೂರ್ಣ ಪ್ರಮಾಣದಲ್ಲಿ ಬಳಕೆ ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ.

ಆ) ನಗರ ಸ್ಥಳೀಯ ಸಂಸ್ಥೆಗಳ ಅಭಿವೃದ್ಧಿಗಾಗಿ ರಾಜ್ಯ ಸರ್ಕಾರದ ಅನುದಾನದಿಂದ ಈ ಕೆಳಕಂಡ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ.

1. ರಾಜ್ಯದ ಮಹಾನಗರಪಾಲಿಕೆಗಳಲ್ಲಿ ಮುಖ್ಯಮಂತ್ರಿಗಳ ರೂ. 100.00 ಕೋಟಿ ವಿಶೇಷ ಯೋಜನೆ.

ರಾಜ್ಯದ 7 ಮಹಾನಗರಪಾಲಿಕೆಗಳಾದ ಮೈಸೂರು, ಮಂಗಳೂರು, ದಾವಣಗೆರೆ, ಹುಬ್ಬಳ್ಳಿ ಧಾರವಾಡ, ಬೆಳಗಾವಿ, ಗುಲ್ಬರ್ಗಾ ಹಾಗೂ ಬಳ್ಳಾರಿ ನಗರಗಳ ವ್ಯಾಪ್ತಿಯಲ್ಲಿ ಮೂಲಭೂತ ಸೌಕರ್ಯಗಳ ಅಭಿವೃದ್ಧಿಗಾಗಿ ತಲಾ ರೂ. 100.00 ಕೋಟಿ ಯೋಜನೆಯನ್ನು 2008–09ನೇ ಸಾಲಿನಿಂದ ಜಾರಿಗೆ ತರಲಾಗಿದೆ. ಈ ಯೋಜನೆಯಡಿಯಲ್ಲಿ ರಸ್ತೆ ಮತ್ತು ಸೇತುವೆಗಳ ಅಭಿವೃದ್ಧಿ, ಮಳೆ ನೀರು ಚರಂಡಿ, ಉದ್ಯಾನವನಗಳ ಅಭಿವೃದ್ಧಿ, ವಾಣಿಜ್ಯ ಸಂಕೀರ್ಣಗಳ ನಿರ್ಮಾಣ, ಪಾದಚಾರಿ ಸುರಂಗ ಮಾರ್ಗ (ಸಬ್‌ವೇ), ಸ್ಮಶಾನಗಳ ಅಭಿವೃದ್ಧಿ ಕೆರೆಗಳ ಅಭಿವೃದ್ಧಿ, ನಗರ ಸಂಚಾರ ದಟ್ಟಣೆ ನಿರ್ವಹಣೆ ಕಾಮಗಾರಿಗಳು ಹಾಗೂ ಘನ ತ್ಯಾಜ್ಯ ನಿರ್ವಹಣೆ ಕಾಮಗಾರಿ ಮತ್ತು ಯಂತ್ರೋಪಕರಣಗಳ ಖರೀದಿಗೆ ಕ್ರಿಯಾ ಯೋಜನೆಗಳನ್ನು ಅನುಮೋದಿಸಲಾಗಿದೆ.

7 ಮಹಾನಗರಪಾಲಿಕೆಗಳಲ್ಲಿ ಒಟ್ಟು 1435 ಕಾಮಗಾರಿಗಳನ್ನು ಕೈಗೊಂಡಿದ್ದು ಇಲ್ಲಿಯವರೆಗೆ ರೂ. 444.73 ಕೋಟಿ ವೆಚ್ಚದಲ್ಲಿ 926 ಕಾಮಗಾರಿಗಳು ಪೂರ್ಣಗೊಂಡಿದೆ ಹಾಗೂ ಶೇ. 93.23ರಷ್ಟು ಆರ್ಥಿಕ ಪ್ರಗತಿಯಾಗಿರುತ್ತದೆ. ಬಾಕಿ 509 ಕಾಮಗಾರಿಗಳನ್ನು ಮಾರ್ಚ್ 2011ರ ಅಂತ್ಯದೊಳಗೆ ಪೂರ್ಣಗೊಳಿಸಲು ಕ್ರಮಕೈಗೊಳ್ಳಲಾಗಿದೆ.

2. ಮುಖ್ಯಮಂತ್ರಿಗಳ ಸಣ್ಣ ಮತ್ತು ಮಧ್ಯಮ ಪಟ್ಟಣಗಳ ಅಭಿವೃದ್ಧಿ ಕಾರ್ಯಕ್ರಮ (CMSMTDP)

ರಾಜ್ಯದ 211 ನಗರ ಸ್ಥಳೀಯ ಸಂಸ್ಥೆಗಳಲ್ಲಿ ಮುಖ್ಯಮಂತ್ರಿಗಳ ಸಣ್ಣ ಮತ್ತು ಮಧ್ಯಮ ಪಟ್ಟಣಗಳ ಅಭಿವೃದ್ಧಿ ಯೋಜನೆಯನ್ನು 2009–10ನೇ ಸಾಲಿನಿಂದ 2 ವರ್ಷದ ಅವಧಿಗೆ ಮೊದಲ ಹಂತದಲ್ಲಿ ಜಾರಿಗೆ ತರಲಾಗಿರುತ್ತದೆ. ಈ ಯೋಜನೆಯಡಿಯಲ್ಲಿ ಜಿಲ್ಲಾ ಕೇಂದ್ರದ ನಗರ ಸಭೆಗಳಿಗೆ 2 ವರ್ಷಗಳಿಗೆ ತಲಾ ರೂ. 30.00 ಕೋಟಿ, ತಾಲ್ಲೂಕು ಕೇಂದ್ರ ಪಟ್ಟಣಗಳಿಗೆ ತಲಾ ರೂ. 5.00 ಕೋಟಿ ಮತ್ತು ಇತರೆ ಪಟ್ಟಣಗಳಿಗೆ ತಲಾ ರೂ. 2.00 ಕೋಟಿ ಅನುದಾನದಂತೆ ಒಟ್ಟು ರೂ. 1454.00 ಕೋಟಿ ಅನುದಾನವನ್ನು ಹಂಚಿಕೆ ಮಾಡಲಾಗಿದೆ.

ಈ ಯೋಜನೆಯಡಿಯಲ್ಲಿ ಮುಖ್ಯವಾಗಿ ಮೂಲ ಸೌಕರ್ಯಗಳಾದ ನೀರು ಸರಬರಾಜು, ಒಳಚರಂಡಿ, ನಗರ ಚರಂಡಿ, ಘನತ್ಯಾಜ್ಯ ವಸ್ತು ನಿರ್ವಹಣೆ, ರಸ್ತೆಗಳು, ಪಾದಚಾರಿ ಮಾರ್ಗ ಮತ್ತು ರಸ್ತೆ ಇಕ್ಕೆಲಗಳ ಚರಂಡಿ, ಕೊಳಚೆ ಪ್ರದೇಶ ಉನ್ನತೀಕರಣ, ಬೀದಿ ದೀಪಗಳು/ಹೈಮಾಸ್ಕ್ಟ ದೀಪಗಳು ಇತರ ಮೂಲಭೂತ ಕಾಮಗಾರಿಗಳನ್ನು ತೆಗೆದುಕೊಳ್ಳಬಹುದಾಗಿರುತ್ತದೆ.

ಇಲ್ಲಿಯವರೆವಿಗೂ ಸರ್ಕಾರದಿಂದ ರೂ. 750.00 ಕೋಟಿ ಹಣ ಬಿಡುಗಡೆಯಾಗಿದ್ದು ರೂ. 510.21 ಕೋಟಿ ವೆಚ್ಚವಾಗಿರುತ್ತದೆ. ರೂ. 1448.90 ಮೊತ್ತದ ಒಟ್ಟು 8126 ಕಾಮಗಾರಿಗಳ ಕ್ರಿಯಾಯೋಜನೆ ಅನುಮೋದನೆಯಾಗಿರುತ್ತದೆ ಇವುಗಳಲ್ಲಿ 3029 ಕಾಮಗಾರಿಗಳು ಪೂರ್ಣಗೊಂಡಿರುತ್ತದೆ.

3. ರಾಜ್ಯ ಹಣಕಾಸು ಆಯೋಗದ ಅನುದಾನ

ನಗರಾಭಿವೃದ್ಧಿ ಇಲಾಖಾ ವತಿಯಿಂದ ಎಸ್ಎಫ್ಸಿ ಮುಕ್ತನಿಧಿ (SFC United Grants) ಯೋಜನೆಯಡಿಯಲ್ಲಿ 2009–10ನೇ ಸಾಲಿಗೆ ಹಂಚಿಕೆಯಾದ ಮೊತ್ತ ರೂ. 1088.00.00 ಲಕ್ಷಗಳು, ಬಿಡುಗಡೆಯಾದ ಮೊತ್ತ ರೂ. 91600.00 ಲಕ್ಷಗಳು ಹಾಗೂ 2010–11ನೇ ಸಾಲಿಗೆ ಹಂಚಿಕೆಯಾದ ಮೊತ್ತ ರೂ. 88100.00 ಲಕ್ಷಗಳು, ಇಲ್ಲಿಯವರೆಗೆ ಬಿಡುಗಡೆಯಾದ ಮೊತ್ತ ರೂ. 65257.21 ಲಕ್ಷಗಳಾಗಿದ್ದು, ಸದರಿ ಅನುದಾನವನ್ನು ರಾಜ್ಯದಲ್ಲಿರುವ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳ ಅಭಿವೃದ್ಧಿ ಕಾಮಗಾರಿಗಳಾದ ರಸ್ತೆ ನಿರ್ಮಾಣ/ ಅಗಲೀಕರಣ, ನೀರು ಸರಬರಾಜು, ಒಳಚರಂಡಿ ನಿರ್ಮಾಣ, ಚರಂಡಿಗಳು ಮತ್ತು ಮಳೆ ನೀರು ಚರಂಡಿ, ಕೊಳಚೆ ಪ್ರದೇಶಗಳ ಅಭಿವೃದ್ಧಿ ಹಾಗೂ ಇನ್ನಿತರೆ ಕಾಮಗಾರಿಗಳಿಗೆ ಬಳಸಲಾಗುತ್ತಿದೆ.

ಇ) ರಾಜ್ಯದ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳ ಮೂಲಭೂತ ಸೌಕರ್ಯಗಳ ಅಭಿವೃದ್ಧಿಗಾಗಿ ಈ ಮೇಲಿನಂತೆ ರಾಜ್ಯ ಹಣಕಾಸು ಆಯೋಗದ ಅನುದಾನ, 8 ಮಹಾನಗರಪಾಲಿಕೆಗಳಿಗೆ ಮುಖ್ಯಮಂತ್ರಿಗಳ ರೂ. 100.00 ಕೋಟಿ ಯೋಜನೆ ಮತ್ತು ಇತರೆ ನಗರ ಸ್ಥಳೀಯ ಸಂಸ್ಥೆಗಳಿಗೆ ಮುಖ್ಯಮಂತ್ರಿಗಳ ಸಣ್ಣ ಮತ್ತು ಮಧ್ಯಮ ಪಟ್ಟಣಗಳ ಅಭಿವೃದ್ಧಿ ಯೋಜನೆಯಡಿ ಅನುದಾನವನ್ನು ಬಿಡುಗಡೆ ಮಾಡಿ ವಿವಿಧ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲು ಕ್ರಮ ಕೈಗೊಳ್ಳಲಾಗಿದೆ.